# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ, ವಾರ್ಡ್ ಸಮಿತಿ /ಸಹಾಯಕ ಇಂಜಿನಿಯರ್‌ರವರ ಕಛೇರಿ, ಶಂಕರಮಠ ವಾರ್ಡ್ ಸಂಖ್ಯೆ: 75,
15ನೇ ಮುಖ್ಯರಸ್ತೆ, 4ನೇ ಅಡ್ಡರಸ್ತೆ, ಕಿರ್ಲೋಸ್ಕರ್ ಕಾಲೋನಿ, 3ನೇ ಹಂತ, ಬೆಂಗಳೂರು-79.


ಸಂಖ್ಯೆ: ವಾ-75/ವಾ.ಸ./ಸಭಾನಡವಳಿ-24/2021-22

ದಿನಾಂಕ: 31 /03/2022

## -:ಸಭೆಯ ನಡವಳಿಗಳು:-

ಮಾನ್ಯ ನೋಡಲ್ ಅಧಿಕಾರಿಯವರ ಆದೇಶದಂತೆ, ದಿನಾಂಕ: 19/03/2022 ಶನಿವಾರದಂದು ಬೆಳಿಗ್ಗೆ 10.30 ಘಂಟೆಗೆ ವಾರ್ಡ್-75 ಶಂಕರಮಠದ ವಾರ್ಡ್ ಮಟ್ಟದ ಸಮಿತಿ ಸಭೆಯನ್ನು ಆಯೋಜಿಸಲಾಯಿತು.

ಶ್ರೀ ಬೆನಕೇಶ್ ಆರ್. ವಾರ್ಡ್ ಸಮಿತಿಯ, ಕಾರ್ಯದರ್ಶಿಗಳು ರವರು ಸಭೆಯನ್ನು ನಡೆಸುತ್ತಾ, ಸಾರ್ವಜನಿಕರ ಕುಂದು ಕೊರತೆಗಳು ಹಾಗೂ ವಾರ್ಡ್ ಅಭಿವೃದ್ಧಿಗೆ ಸಂಭಂಧಿಸಿದಂತೆ ಹಾಗೂ ಕೋವಿಡ್-19 ವೈರಸ್‌ನ ಸೋಂಕಿನ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಹಾಗೂ ಸಾರ್ವಜನಿಕರ ಹಿತರಕ್ಷಣೆಗಾಗಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಯಲ್ಲಿ ಉಪಸ್ಥಿತರಾಗಿರುವ ಮಾನ್ಯ ನೋಡಲ್ ಅಧಿಕಾರಿಯವರಿಗೆ ಮತ್ತು ಸಭೆಗೆ ಆಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಶ್ರೀ ಬೆನಕೇಶ್ ಆರ್. ರವರು ಸಭೆಗೆ ಸ್ವಾಗತ ಕೋರುತ್ತಾ, ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು.

**ಸಭೆಯಲ್ಲಿ ಹಾಜರಿದ್ದವರು:-**

| | |
|---|---|
| 1 | ಶ್ರೀ. ಎಲ್. ಸುರೇಶ್, ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್-75, ಬಿಬಿಎಂಪಿ |
| 2 | ಶ್ರೀ ಬೆನಕೇಶ್ ಆರ್. ಸಮಿತಿ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು, ವಾರ್ಡ್-75, ಬಿಬಿಎಂಪಿ |
| 3 | ಶ್ರೀಮತಿ ಡಾ. ಕುಸುಮ ಎಸ್., ಮೆಡಿಕಲ್ ಆಫಿಸರ್, ಆರೋಗ್ಯ ಇಲಾಖೆ, ವಾರ್ಡ್-75, ಬಿಬಿಎಂಪಿ. |
| 4 | ಶ್ರೀ ಎಸ್.ಲೋಕೇಶ್, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್-75, ಬಿಬಿಎಂಪಿ. |
| 5 | ಶ್ರೀ ಸಿದ್ದರಾಮೇಶ್ವರ್, ಕಂದಾಯ ಪರಿವಿಕ್ಷಕರು, ವಾರ್ಡ್-75, ಶಂಕರಮಠ, ಬಿಬಿಎಂಪಿ. |
| 6 | ಶ್ರೀ ಕೆ. ಎಮ್. ಕುಮಾರಸ್ವಾಮಿ, ಸಹಾಯಕ ಅಭಿಯಂತರರು, ಬೃನೀ.ಗಾ., ಪಶ್ಚಿಮ, ಬಿಬಿಎಂಪಿ. |
| 8 | ಶ್ರೀ ಸೋಮನಾಥ್, ಸಹಾಯಕ ಅಭಿಯಂತರರು, ಎನ್.ಡಬ್ಲ್ಯು-1 ಉಪವಿಭಾಗ, ಬಿ.ಡಬ್ಲ್ಯೂ.ಎಸ್.ಎಸ್.ಬಿ. |
| 9 | ಶ್ರೀ ಛಾಯಾಪತಿ, ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್-75, ಬಿಬಿಎಂಪಿ. |
| 10 | ಶ್ರೀ ಚನ್ನವೀರಯ್ಯ, ಹೆಡ್ ಗ್ಯಾಂಗ್‌ಮನ್, ಕಾಮಗಾರಿ ವಿಭಾಗ, ವಾರ್ಡ್-75, ಬಿಬಿಎಂಪಿ. |
| 11 | ಶ್ರೀ ಎನ್. ಮಂಜುನಾಥ್, ಮೇಸ್ತ್ರಿ, ತೋಟಗಾರಿಕೆ ವಿಭಾಗ, ಪಶ್ಚಿಮ, ಬಿಬಿಎಂಪಿ. |
| 12 | ಶ್ರೀ ಪುಟ್ಟಸ್ವಾಮಿ, ಉದ್ಯಾನವನಗಳ ನಿರ್ವಹಣೆ ಗುತ್ತಿಗೆದಾರರು, ವಾರ್ಡ್-75, ಬಿಬಿಎಂಪಿ. |
| 13 | ಶ್ರೀ ಸಲ್ಮಾನ್, ಬೀದಿ ದೀಪಗಳ ನಿರ್ವಹಣೆ ಗುತ್ತಿಗೆದಾರರು, ವಾರ್ಡ್-75, ಬಿಬಿಎಂಪಿ. |
| 14 | ಶ್ರೀ ದರ್ಶನ್ ಕೆ. ಆರ್. ವಾರ್ಡ್ ಮಾರ್ಷಲ್, ವಾರ್ಡ್-75, ಬಿಬಿಎಂಪಿ. |
| 15 | ಶ್ರೀ ಸಿದ್ದರಾಜು ಸೋಸಲೆ, ವಾರ್ಡ್‌ನ ನಾಗರೀಕರು, ವಾರ್ಡ್-75. |
| 16 | ಶ್ರೀ ಬ್ಯಾಟರಾಯಸ್ವಾಮಿ, ವಾರ್ಡ್‌ನ ನಾಗರೀಕರು, ವಾರ್ಡ್-75. |
| 17 | ಶ್ರೀ ಆರ್. ಮಂಜುನಾಥ್, ವಾರ್ಡ್‌ನ ನಾಗರೀಕರು, ವಾರ್ಡ್-75. |
| 18 | ಶ್ರೀ ಕೆ. ಗಣೇಶ್, ವಾರ್ಡ್‌ನ ನಾಗರೀಕರು, ವಾರ್ಡ್-75. |
| 19 | ಶ್ರೀ ಲಕ್ಷ್ಮಣ್, ವಾರ್ಡ್‌ನ ನಾಗರೀಕರು, ವಾರ್ಡ್-75. |
| 20 | ಶ್ರೀ ರವೀಶ್, ವಾರ್ಡ್‌ನ ನಾಗರೀಕರು, ವಾರ್ಡ್-75. |
| 21 | ಶ್ರೀ ವಿಜಯ್‌ಕುಮಾರ್, ವಾರ್ಡ್‌ನ ನಾಗರೀಕರು, ವಾರ್ಡ್-75. |
| 22 | ಶ್ರೀ ಜಿ. ಸಂಜಯ್, ವಾರ್ಡ್‌ನ ನಾಗರೀಕರು, ವಾರ್ಡ್-75. |
| 23 | ಶ್ರೀ. ಎನ್. ವಿ. ಬಾಹುಬಲಿ, ವಾರ್ಡ್‌ನ ನಾಗರೀಕರು, ವಾರ್ಡ್-75. |

ಮು.ತಿ.ನೋ.

Scanned by CamScanner

## ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:-

1. **ಆರೋಗ್ಯ ಇಲಾಖೆ ಮತ್ತು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-**
   - ಮಾನ್ಯ ನೋಡಲ್ ಅಧಿಕಾರಿಯವರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಮಾತನಾಡುತ್ತಾ, ವಾರ್ಡ್-75 ಶಂಕರಮಠದಲ್ಲಿ ಕೋವಿಡ್-19ಗೆ ಸಂಬಂಧಿಸಿದಂತೆ ಮಾಹಿತಿಗಳು ವಿವರಣೆ ನೀಡುವಂತೆ ಸಭೆಯಲ್ಲಿ ತಿಳಿಸಿದರು.
   - ಶ್ರೀಮತಿ ಡಾ. ಕುಸುಮ ಎಸ್., ವೈದ್ಯಕೀಯ ಅಧಿಕಾರಿ, ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಹೊಸದಾಗಿ ಯಾವುದೇ ಕೋವಿಡ್-19 ಸೋಂಕಿತರು ಕಂಡುಬಂದಿರುವುದಿಲ್ಲ, ವಾರ್ಡ್ ವ್ಯಾಪ್ತಿಯಲ್ಲಿನ 15 ರಿಂದ 18 ವರ್ಷದ ಎಲ್ಲಾ ಶಾಲಾ ಮಕ್ಕಳಿಗೆ ಕೋವಿಡ್ ಲಸಿಕೆ ನೀಡಲಾಗಿದ್ದು, ನಂತರದಲ್ಲಿ 13 ರಿಂದ 15 ವರ್ಷದ ಮಕ್ಕಳಿಗೆ ಲಸಿಕೆಯನ್ನು ನೀಡುವ ಕಾರ್ಯಕ್ರಮವನ್ನು ಕೈಗೊಳ್ಳಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

2. **ಅಭಿಯಂತರರ ವಿಭಾಗದ ಬಗ್ಗೆ:-**
   - ಶ್ರೀ ಮಂಜುನಾಥ್, ವಾರ್ಡ್‌ನ ನಾಗರೀಕರು ಮಾತನಾಡುತ್ತಾ, 17ನೇ ಮುಖ್ಯರಸ್ತೆಯ ಚರಂಡಿಯಲ್ಲಿ ಹೂಳು ತೆಗೆಯುವುದು ಮತ್ತು ಡಾಂಬರೀಕರಣ ಮಾಡಬೇಕಾಗಿ ಸಭೆಯಲ್ಲಿ ಕೋರಿದರು.
   - ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ಸ್ಥಳ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಸಭೆಯಲ್ಲಿ ತಿಳಿಸಿದರು.
   - ಶ್ರೀ ಮಂಜುನಾಥ್, ವಾರ್ಡ್‌ನ ನಾಗರೀಕರು ಮಾತನಾಡುತ್ತಾ, 16ನೇ ಮುಖ್ಯರಸ್ತೆ, 1ನೇ ಅಡ್ಡರಸ್ತೆಯಲ್ಲಿ ಮತ್ತು 18ನೇ ಮುಖ್ಯರಸ್ತೆಗಳಲ್ಲಿನ ಚರಂಡಿಯ ಕವರಿಂಗ್ ಸ್ಲಾಬ್ ಬಿಟ್ಟುಹೋಗಿರುತ್ತದೆ. ಸಿದ್ದಾರೂಢ ಉದ್ಯಾನವನದಲ್ಲಿ ಗೇಟ್ ಅಳವಡಿಸಿಕೊಡುವಂತೆ ಸಭೆಯಲ್ಲಿ ಕೋರಿದರು.
   - ಶ್ರೀ ಸಿದ್ದಾರಾಜು ಸೋಸಲೆ, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಅಳವಡಿಸಲಾದ ಸಿಸಿ ಕ್ಯಾಮೆರಾಗಳ ನಿರ್ವಹಣೆಯು ಸರಿಯಾಗಿ ನಡೆಯುತ್ತಿರುವುದಿಲ್ಲ ಎಂದು ಸಭೆಯಲ್ಲಿ ದೂರಿದರು.
   - ಮಾನ್ಯ ನೋಡೆಲ್ ಅಧಿಕಾರಿಯವರು ಮಾತನಾಡುತ್ತಾ, ಸ್ಥಳ ಪರಿಶೀಲಿಸಿ ಸದರಿ ವಿಷಯವಾಗಿ ಸೂಕ್ತ ಕ್ರಮ ಕೈಗೊಳ್ಳುವಂತೆ ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಸಭೆಯಲ್ಲಿ ತಿಳಿಸಿದರು.
   - ಮಾನ್ಯ ನೋಡೆಲ್ ಅಧಿಕಾರಿಯವರು ಮಾತನಾಡುತ್ತಾ, ಕಳೆದ ಸಭೆಯಲ್ಲಿ ಶ್ರೀ ಬಾಹುಬಲಿ, ವಾರ್ಡ್‌ನ ನಾಗರೀಕರು ರವರ ದೂರಿನಂತೆ ಕಿರ್ಲೋಸ್ಕರ್ ಕಾಲೋನಿಯಲ್ಲಿರುವ ಬೃಹತ್ ನೀರುಗಾಲುವೆಯ ಬಗ್ಗೆ ತೆಗೆದುಕೊಂಡಿರುವ ಕ್ರಮದ ಬಗ್ಗೆ ವರದಿ ನೀಡುವಂತೆ ಸಭೆಯಲ್ಲಿ ತಿಳಿಸಿದರು.
   - ಶ್ರೀ ಕುಮಾರಸ್ವಾಮಿ, ಸಹಾಯಕ ಅಭಿಯಂತರರು, ಬೃನೀ.ಗಾ. ವಿಭಾಗ ರವರು ಮಾತನಾಡುತ್ತಾ, ಸದರಿ ಸ್ಥಳವನ್ನು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.
   - ಶ್ರೀ ಸುಬ್ರಮಣಿ, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯ ಲಕ್ಷ್ಮೀನಗರ ಮತ್ತು ಕಿರ್ಲೋಸ್ಕರ್ ಕಾಲೋನಿ 3ನೇ ಹಂತದ ರಸ್ತೆಗಳಲ್ಲಿ ಜಿಯೋ ಕಂಪೆನಿ ರವರು ಓ.ಎಫ್.ಸಿ. ಕೇಬಲ್ ಅಳವಡಿಸಲು ರಸ್ತೆಗಳನ್ನು ಅಗೆದು ಹಾಳು ಮಾಡಿರುವುದಾಗಿ ಸಭೆಯಲ್ಲಿ ದೂರಿದರು.
   - ಮಾನ್ಯ ನೋಡೆಲ್ ಅಧಿಕಾರಿಯವರು ಮಾತನಾಡುತ್ತಾ, ಸದರಿ ರಸ್ತೆಗಳನ್ನು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಬೇಕಾಗಿ ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಸಭೆಯಲ್ಲಿ ತಿಳಿಸಿದರು.

3. **ವಿದ್ಯುತ್ ವಿಭಾಗದ ಬಗ್ಗೆ:-**
   - ಶ್ರೀ ಸಿದ್ಧರಾಜು ಸೋಸಲೆ ಮತ್ತು ಶ್ರೀ ಸುಬ್ರಮಣಿ, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿನ ಉದ್ಯಾನವನಗಳಲ್ಲಿನ ವಿದ್ಯುತ್ ದೀಪಗಳನ್ನು ಹಾಗೂ ಬೀದಿ ದೀಪಗಳನ್ನು ಸರಿಯಾಗಿ ನಿರ್ವಹಣೆ ಮಾಡುತ್ತಿರುವುದಿಲ್ಲ ಎಂದು ಸಭೆಯಲ್ಲಿ ದೂರಿದರು.
   - ಮಾನ್ಯ ನೋಡಲ್ ಅಧಿಕಾರಿಯವರು ಶ್ರೀ ಕಾಂತರಾಜು (ವಿದ್ಯುತ್ ದೀಪಗಳ ನಿರ್ವಹಣೆ ಗುತ್ತಿಗೆದಾರರು) ರವರಿಗೆ ದೂರವಾಣಿ ಮುಖಾಂತರ ಸಂಪರ್ಕಿಸಿ ಮಾತನಾಡುತ್ತಾ, ಸ್ಥಳಗಳನ್ನು ಪರಿಶೀಲಿಸಿ ಶೀಘ್ರವಾಗಿ ಸೂಕ್ತ ಕ್ರಮ ಕೈಗೊಂಡು ಮುಂದಿನ ಸಭೆಯಲ್ಲಿ ವರದಿ ಮಾಡುವಂತೆ ಸಭೆಯಲ್ಲಿ ತಿಳಿಸಿದರು.

ಮು.ತಿ.ನೋ.

Scanned by CamScanner

4. **ಪಶುಪಾಲನೆ ವಿಭಾಗದ ಬಗ್ಗೆ:-**

- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ನಾಯಿಗಳು ಹೆಚ್ಚಾಗಿದ್ದು ಈ ಬಗ್ಗೆ ಸಾರ್ವಜನಿಕರಿಂದ ದೂರುಗಳು ಹೆಚ್ಚಾಗುತ್ತಿರುತ್ತದೆ. ಆದುದರಿಂದ ಬೀದಿ ನಾಯಿಗಳಿಗೆ ರೇಬಿಸ್ ವ್ಯಾಕ್ಸಿನೇಷನ್ ಅಳವಡಿಸಲು ಸೂಕ್ತ ಕ್ರಮವಹಿಸುವಂತೆ ಹಿರಿಯ ವೆಟರಿನರಿ ಪರಿವೀಕ್ಷಕರು ರವರಿಗೆ ತಿಳಿಸುವಂತೆ ಕಾರ್ಯದರ್ಶಿಗಳಿಗೆ ಸಭೆಯಲ್ಲಿ ತಿಳಿಸಿದರು.

5. **ಕಂದಾಯ ವಿಭಾಗದ ಬಗ್ಗೆ:-**

- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಎಂದಿನಂತೆ ವಾರ್ಡ್ ವ್ಯಾಪ್ತಿಯಲ್ಲಿ ಸಂಗ್ರಹವಾದ ಕಂದಾಯದ ಮೊತ್ತ ಹಾಗೂ ಕಂದಾಯ ಸಂಗ್ರಹಣೆಗಾಗಿ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ವರದಿ ನೀಡುವಂತೆ ಕಂದಾಯ ಪರಿವೀಕ್ಷಕರು ವಾರ್ಡ್-75 ರವರಿಗೆ ತಿಳಿಸಿದರು.
- ಶ್ರೀ ಸಿದ್ದರಾಮೇಶ್ವರ್ ಮತ್ತು ಶ್ರೀ ಸುನೀಲ್ ಕುಮಾರ್, ಕಂದಾಯ ಪರಿವೀಕ್ಷಕರು, ವಾಡ್-75 ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಸರಿಯಾದ ರೀತಿಯಲ್ಲಿ ಕಂದಾಯ ಸಂಗ್ರಹಣೆಯಾಗುತ್ತಿದ್ದು, 01-ಏಪ್ರಿಲ್-2021 ರಿಂದ 19-ಮಾರ್ಚ್-2022ರ ವರೆಗೆ ಬಾಕಿ ಹಾಗೂ ಪ್ರಸ್ತುತ ಸಾಲಿನ ಒಟ್ಟು ಮೊತ್ತ ರೂ.5.60 ಕೋಟಿಗಳಷ್ಟು ಕಂದಾಯ ಸಂಗ್ರಹವಾಗಿರುವುದಾಗಿ ತಿಳಿಸುತ್ತಾ, ಕಂದಾಯದ ವಿವರಗಳನ್ನು ಸಭೆಯಲ್ಲಿ ಸಲ್ಲಿಸಿದರು.

6. **ಅರಣ್ಯ ವಿಭಾಗದ ಬಗ್ಗೆ:-**

- ಶ್ರೀ ಸಿದ್ದರಾಜು ಸೋಸಲೆ, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, 15ನೇ ಮುಖ್ಯರಸ್ತೆಯಲ್ಲಿ ಚನ್ನರೇ ಆಸ್ಪತ್ರೆಯ ಹತ್ತಿರದ ಮರದಲ್ಲಿ ಹುಳಗಳು ತುಂಬಿಕೊಂಡಿದ್ದು, ಇದರಿಂದಾಗಿ ಅಕ್ಕಪಕ್ಕದ ಮನೆಗಳಿಗೆ ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ದೂರಿದರು.
- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ಸದರಿ ದೂರಿನಂತೆ ಮರವನ್ನು ಪರಿಶೀಲಿಸಿ ರೆಂಬೆಗಳನ್ನು ತೆರವುಗೊಳಿಸಲು ಕ್ರಮವಹಿಸುವಂತೆ ಶ್ರೀ ಮಲ್ಲಪ್ಪ, ಮೇಸ್ತ್ರಿ, ಅರಣ್ಯ ಇಲಾಖೆ, ಬಿಬಿಎಂಪಿ ರವರಿಗೆ ದೂರವಾಣಿ ಮುಖಾಂತರ ಸಭೆಯಲ್ಲಿ ತಿಳಿಸಿದರು.

7. **ಘನತ್ಯಾಜ್ಯ ನಿರ್ವಹಣೆ ವಿಭಾಗದ ಬಗ್ಗೆ:-**

- ಶ್ರೀ ರವೀಶ್, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ಜೆ.ಸಿ.ನಗರದ 19ನೇ ಮುಖ್ಯರಸ್ತೆಯ ಕೊನೆಯಲ್ಲಿರುವ ಬೃ.ನೀ.ಗಾಲುವೆಯ ಸೇತುವೆಯ ಮೇಲೆ ಮತ್ತು ಭಾಗ್ಯದ ಬಾಗಿಲು ರಸ್ತೆಯಲ್ಲಿ ಹೆಚ್ಚಾಗಿ ಕಸ ಬೀಳುತ್ತಿರುವುದಾಗಿ ಸಭೆಯಲ್ಲಿ ದೂರಿದರು.
- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿರುವ ಎಲ್ಲಾ ಬ್ಲಾಕ್ ಸ್ಪಾಟ್‌ಗಳಲ್ಲಿ ಪರಿವೀಕ್ಷಣೆ ನಡೆಸಿ ಅಧಿಕಾರಿಗಳು ಸೂಕ್ತ ಕ್ರಮವಹಿಸಬೇಕಾಗಿ ಸಭೆಯಲ್ಲಿ ಕೋರಿದರು.

8. **ತೋಟಗಾರಿಕೆ ವಿಭಾಗದ ಬಗ್ಗೆ:-**

- ಶ್ರೀ ಸಿದ್ದರಾಜು ಸೋಸಲೆ, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿರುವ ಉದ್ಯಾನವನಗಳಲ್ಲಿ ನಿರ್ವಹಣೆಯನ್ನು ಸರಿಯಾಗಿ ನಿರ್ವಹಿಸುತ್ತಿರುವುದಿಲ್ಲ ಎಂದು ಸಭೆಯಲ್ಲಿ ದೂರಿದರು.
- ಶ್ರೀ ಎನ್. ಮಂಜುನಾಥ್, ಮೇಸ್ತ್ರಿ, ತೋಟಗಾರಿಕೆ ಇಲಾಖೆ ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿರುವ ಎಲ್ಲಾ ಉದ್ಯಾನವನಗಳನ್ನು ಪರಿಶೀಲಿಸಲಾಗಿ ಎಲ್ಲಾ ಉದ್ಯಾನವನಗಳಲ್ಲಿನ ಕಸವನ್ನು ತೆರವುಗೊಳಿಸಲಾಗಿತ್ತಿದೆ ಎಂದು ಸಭೆಯಲ್ಲಿ ತಿಳಿಸಿದರು.

9. **ಬೆಸ್ಕಾಂ ವಿಭಾಗದ ಬಗ್ಗೆ:-**

- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ಬೆಸ್ಕಾಂ ವತಿಯಿಂದ ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ಕೇಬಲ್ ಅಳವಡಿಸಲು ರಸ್ತೆಗಳನ್ನು ಅಗೆದು, ಕೆಲವು ರಸ್ತೆಗಳನ್ನು ಇನ್ನೂ ಸರಿಪಡಿಸದೇ ಹಾಗೇ ಬಿಟ್ಟಿರುವುದಾಗಿ ಸಾರ್ವಜನಿಕರಿಂದ ಹೆಚ್ಚಾಗಿ ದೂರುಗಳು ಬಂದಿರುತ್ತದೆ. ಹಾಗೂ ಶೀಘ್ರವಾಗಿ ರಸ್ತೆ ಗುಂಡಿಗಳನ್ನು ಸರಿಪಡಿಸಬೇಕಾಗಿ ಮಾನ್ಯ ಹೈಕೋರ್ಟ್ ಆದೇಶವಿರುತ್ತದೆ. ಆದುದರಿಂದ ಶೀಘ್ರವಾಗಿ ಕೇಬಲ್ ಅಳವಡಿಸಲು ಅಗೆದಿರುವ ಗುಂಡಿಗಳನ್ನು ಶೀಘ್ರವಾಗಿ ಪುನಃಸ್ಥಾಪನೆ ಮಾಡಲು ಬೆಸ್ಕಾಂ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕಾಗಿ ಸಭೆಯಲ್ಲಿ ತಿಳಿಸಿದರು.

ಮು.ತಿ.ನೋ.

Scanned by CamScanner

NAGAR



10. <u>ಬಿ.ಡಬ್ಲ್ಯೂ.ಎಸ್.ಎಸ್.ಬಿ. ವಿಭಾಗದ ಬಗ್ಗೆ:-</u>

- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ಬಿಡಬ್ಲ್ಯೂಎಸ್‌ಎಸ್‌ಬಿ ವತಿಯಿಂದ ವಾ ವ್ಯಾಪ್ತಿಯಲ್ಲಿ ಒಳಚರಂಡಿ ಕಾಂಕ್ರೀಟ್ ಪೈಪ್‌ಲೈನ್ ಅಳವಡಿಸಲು ಅಗೆದಿರುವ ರಸ್ತೆಯ ಭಾಗಗಳನ್ನು ಶೀಘ್ರವಾಗಿ ಪುನಃಸ್ಥಾಪನೆ ಮಾಡಲು ಬಿಡಬ್ಲ್ಯೂಎಸ್‌ಎಸ್‌ಬಿ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕಾಗಿ ಸಭೆಯಲ್ಲಿ ತಿಳಿಸಿದರು.

11. <u>ಪೊಲೀಸ್ ವಿಭಾಗದ ಬಗ್ಗೆ:-</u>

- ಶ್ರೀ ರವೀಶ್, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯ ಕೆಲವು ಸೂಕ್ಷ್ಮ ಪ್ರದೇಶಗಳಲ್ಲಿ ಪೋಲಿ ಹುಡುಗರ ಹಾವಳಿ ಹೆಚ್ಚಾಗಿರುವುದಾಗಿ ಸಭೆಯಲ್ಲಿ ದೂರಿದರು.
- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ಸದರಿ ದೂರಿನ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಹಾಗೂ ಇಂತಹ ಸೂಕ್ಷ್ಮ ಪ್ರದೇಶಗಳಲ್ಲಿ ಹೆಚ್ಚಾಗಿ ಗಸ್ತು ತಿರುಗಲು ಕ್ರಮ ತೆಗೆದುಕೊಳ್ಳುವಂತೆ ಸಭೆಯಲ್ಲಿ ಹಾಜರಿದ್ದ ಪೊಲೀಸರಿಗೆ ತಿಳಿಸಿದರು.

ಮುಂದುವರೆದು, ಪ್ರತೀ ಸಭೆಯ ಸಭಾ ನಡವಳಿಗಳನ್ನು ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳಿಗೆ ತಲುಪುವಂತೆ ಮಾಡಲು ಕಾರ್ಯದರ್ಶಿ ರವರಿಗೆ ಸೂಚಿಸಿದರು. ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಭಾ ನಡವಳಿಗಳಿಗೆ ಅನುಸಾರವಾಗಿ ತಮ್ಮ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಪಟ್ಟಿ ಮಾಡಿಕೊಂಡು, ಸದರಿ ದೂರುಗಳನ್ನು ಸರಿಪಡಿಸಿರುವ ಬಗ್ಗೆ ಅಥವಾ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಟಿಪ್ಪಣಿಯೊಂದಿಗೆ ದಾಖಲಾತಿಗಳನ್ನು ದೃಢೀಕರಿಸಿ ಕಡತದಲ್ಲಿ ತಪ್ಪದೇ **ಪ್ರತೀ ವಾರ್ಡ್ ಸಮಿತಿ ಸಭೆಯಲ್ಲಿ** ವರದಿ ಮಾಡಲು ಹಾಗೂ **ವಾರ್ಡ್ ಕಮಿಟಿ ವಾರ್ಡ್-75 ವಾಟ್ಸ್ ಆಪ್ ಗ್ರೂಪ್** ನಲ್ಲಿ ವರದಿ ಮಾಡಲು ಸೂಚಿಸುತ್ತಾ, ಸಭೆಯನ್ನು ಮುಕ್ತಾಯ ಗೊಳಿಸಲಾಯಿತು. ಕೊನೆಯಲ್ಲಿ ಕಾರ್ಯದರ್ಶಿಗಳು ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು.

ನೋಡಲ್ ಅಧಿಕಾರಿರವರ ಅನುಮೋದನೆ ಮೇರೆಗೆ )

31/3/2022

**ಕಾರ್ಯದರ್ಶಿ**
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 75

<u>ಪ್ರತಿಯನ್ನು :-</u>

1. ಮಾನ್ಯ ವಲಯ ವಿಶೇಷ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ತಾಂತ್ರಿಕ ಸಹಾಯಕರಿಗೆ ಸಲ್ಲಿಸಿದೆ.
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8. ವೈದ್ಯಕೀಯ ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ.

Scanned by CamScanner